# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)/ಪಿಆರ್/62/19-20

ಆಯುಕ್ತರವರ ಕಛೇರಿ
ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 02-08-2019

**ಸುತ್ತೋಲೆ**

**ವಿಷಯ:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆವರಣದಲ್ಲಿರುವ ಕ್ಯಾಂಟೀನ್ ಹಾಗೂ ಸುತ್ತಮುತ್ತಲಿನ ಪ್ರದೇಶದ ಪಾದಚಾರಿ ಮೇಲಿನ ಟೀ/ಕಾಫಿ ಇತ್ಯಾಧಿ ಅನಧಿಕೃತ ಅಂಗಡಿಗಳನ್ನು ತೆರವುಗೊಳಿಸುವ ಬಗ್ಗೆ.

------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿಯ ಆವರಣದಲ್ಲಿರುವ ಕ್ಯಾಂಟೀನ್ ಸಂಜೆ 5.30ಗಂಟೆ ನಂತರವು ತೆರೆಯುವುದರಿಂದ ಶುಚಿತ್ವ ಹಾಗೂ ಶಿಸ್ತು ಪಾಲನೆ ಕಾಪಾಡುವಲ್ಲಿ ವಿಫಲವಾಗಿರುವುದು ಕಂಡುಬಂದಿರುವುದರಿಂದ ಸದರಿ ಕ್ಯಾಂಟೀನ್ ಸಮಯವನ್ನು ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ತೆರೆಯಲು ಹಾಗೂ ಕ್ಯಾಂಟೀನ್ ಮುಂಭಾಗದಲ್ಲಿ ಕ್ಯಾಂಟೀನ್ ವೇಳಾಪಟ್ಟಿಯ ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸಲು ಸೂಚಿಸಿದೆ ಹಾಗೂ ಪಾಲಿಕೆಯ ಸುತ್ತಾಮುತ್ತಲ್ಲಿನ ಪಾದಚಾರಿ ಮೇಲಿನ ಟೀ/ಕಾಫಿ ಇತ್ಯಾಧಿ ಅನಧಿಕೃತ ಅಂಗಡಿಗಳಿಂದ ಪಾದಚಾರಿ ಓಡಾಟಕ್ಕೆ ಅನಾನುಕೂಲವಾಗಿರುವುದರಿಂದ ಈ ಕೂಡಲೇ ತೆರವುಗೊಳಿಸುವ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲು ಸೂಚಿಸಿದೆ.

ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು : ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಆಯುಕ್ತರು / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರು ರವರಿಗೆ ಕಳುಹಿಸಿದೆ.
: ಎಲ್ಲಾ ವಲಯ ಮತ್ತು ಯೋಜನೆಗಳ ಮುಖ್ಯ ಅಭಿಯಂತರರು ರವರಿಗೆ ಕಳುಹಿಸಿದೆ.
: ಅಧ್ಯಕ್ಷರು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸ್ಥಾಯಿ ಸಮಿತಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರು, ವಿರೋಧ ಪಕ್ಷದ ನಾಯಕರುಗಳಿಗೆ ಕಳುಹಿಸಿಕೊಡಲು ಕೋರಿದೆ.
: ಮುಖ್ಯ ಲೆಕ್ಕಾಧಿಕಾರಿ / ಮತ್ತು ಎಲ್ಲಾ ವಲಯದ ಸಹಾಯಕ ನಿಯಂತ್ರಕರು (ಹಣಕಾಸು) ರವರಿಗೆ ಕಳುಹಿಸಿದೆ.
: ಉಪ ನಿಯಂತ್ರಕರು (ಹಣಕಾಸು) ರವರಿಗೆ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರು ರವರಿಗೆ ಕಳುಹಿಸುತ್ತಾ, ಸದರಿ ಸುತ್ತೋಲೆಯನ್ನು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು ಸೂಚಿಸಿದೆ.
: ಆರೋಗ್ಯ ವೈದ್ಯಾಧಿಕಾರಿ (ಶಿವಾಜಿನಗರ) / ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಶಿವಾಜಿನಗರ) ರವರು ಸುತ್ತೋಲೆಯಂತೆ ಜರೂರಾಗಿ ಕ್ರಮಕೈಗೊಂಡು ವರದಿ ಸಲ್ಲಿಸಲು ಸೂಚಿಸಿದೆ.
: ಸಂಬಂಧಪಟ್ಟ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ / ಸಂಬಂಧಪಟ್ಟ ಅಭಿಯಂತರರುಗಳಿಗೆ
: ಕಛೇರಿ ಪ್ರತಿ.